10

## ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಡಾ: ತಳವಾರ್ ಸಾಬಣ್ಣ ಇವರು ಗಮನ ಸೆಳೆಯುವ ಸೂಚನೆ ನಿಯಮ-72 ಅಡಿಯಲ್ಲಿ ಗಮನ ಸೆಳೆಯುವ ಸೂಚನೆಗೆ ಉತ್ತರ.

**ಪ್ರಶ್ನೆ:**

ಶತಮಾನಗಳಿಂದ ಶಿಕ್ಷಣದಿಂದ ದೂರವಿದ್ದ ಹಿಂದುಳಿದ ಸಮುದಾಯದವರು ಸಾಮಾಜಿಕ, ಆರ್ಥಿಕವಾಗಿ ಹಿಂದುಳಿದವರ ಶೈಕ್ಷಣಿಕವಾಗಿ ಅಭಿವೃದ್ಧಿ ಹೊಂದಲು ಸರ್ಕಾರವೇ ವಿದ್ಯಾರ್ಥಿನಿಲಯಗಳನ್ನು ನಿರ್ಮಾಣ ಮಾಡಿದೆ. ಹಳ್ಳಿಗಳಿಂದ ಬಡವರ ಮಕ್ಕಳು ಪಟ್ಟಣಕ್ಕೆ ಬಂದು ವಿದ್ಯಾಭ್ಯಾಸ ಮಾಡಲು ಹಾಸ್ಟೆಲ್‌ಗಳಲ್ಲಿ ನೆಲೆಸಿರುತ್ತಾರೆ. ಆದರೆ ಸರ್ಕಾರವೇ ನಡೆಸುತ್ತಿರುವ ಹಾಸ್ಟೆಲ್‌ಗಳು ಇಂದು ದನದ ಕೊಟ್ಟಿಗೆಗಿಂತ ಕಡೆಯಾಗಿವೆ. ಉಚಿತ ವಸತಿನಿಲಯಗಳಿಗೆ ಪ್ರತಿ ವರ್ಷ ನೂರಾರು ಕೋಟಿಗಳನ್ನು ಖರ್ಚು ಮಾಡಿದರು ಅಧಿಕಾರಿಗಳು, ವಾರ್ಡನ್‌ಗಳು ಮತ್ತು ಮಧ್ಯವರ್ತಿಗಳ ದುರಾಸೆ ಮತ್ತು ದುರ್ವತನೆಯಿಂದ ಇಂದು ಹಾಸ್ಟೆಲ್‌ಗಳು ಬಡ ವಿದ್ಯಾರ್ಥಿಗಳಿಗೆ ಪ್ರತಿದಿನ ನರಕ ದರ್ಶನ ಮಾಡಿಸುತ್ತಿವೆ. ಮಕ್ಕಳ ಶಿಕ್ಷಣಕ್ಕೆ ಪೂರಕವಾಗಲಿ ಎಂದು ಪುಸ್ತಕ, ಪೆನ್ನು, ಸೋಪು, ಹಾಸಿಗೆ-ದಿಂಬು, ಪೌಷ್ಟಿಕಾಂಶದ ಆಹಾರ ಸಾಮಗ್ರಿಗಳು ಕೊಡಬೇಕೆಂದಿದ್ದರೂ ಅಧಿಕಾರಿಗಳ ವಾರ್ಡನ್‌ಗಳು ಭ್ರಷ್ಟಾಚಾರದಿಂದ ಇವು ಯಾವುವು ಪೂರೈಕೆಯಾಗುತ್ತಿಲ್ಲ. ಒಳ್ಳೆಯ ಶಿಕ್ಷಣದ ವಾತಾವರಣ, ಒಳ್ಳೆಯ ಊಟದ ವ್ಯವಸ್ಥೆ, ಕುಡಿಯುವ ನೀರು ಯಾವುದು ಸರಿಯಾಗಿ ಸಿಗದೆ ಬಡವರ ಮಕ್ಕಳಿಗೆ ಅನ್ಯಾಯ ಮಾಡಿದಂತಾಗಿದೆ. ಇದು ಅಲ್ಲದೆ ಅಡುಗೆ ಮಾಡುವವರು, ವಾರ್ಡನ್ ಗಳು ಮುಂತಾದ ಸಿಬ್ಬಂದಿಗಳ ಕೊರತೆಯಿಂದ ಹಾಸ್ಟೆಲ್‌ಗಳು ಸರಿಯಾದ ನಿರ್ವಹಣೆ ಆಗುತ್ತಿಲ್ಲಾ.

ಶತಮಾನಗಳಿಂದ ಶಿಕ್ಷಣವಂಚಿತ ಹಿಂದುಳಿದ ಬಡವರ ಮಕ್ಕಳು ನಗರಗಳ ಹಾಸ್ಟೆಲ್‌ಗಳಲ್ಲಿ ಉಳಿದುಕೊಳ್ಳಲು ಬಂದರೆ ವ್ಯವಸ್ಥೆಗಳ ಕೊರತೆ, ಗುಣ ಮಟ್ಟವಿಲ್ಲದ ಊಟ, ಅಧಿಕಾರಿಗಳ/ವಾರ್ಡನ್‌ಗಳ ಭ್ರಷ್ಟಾಚಾರ, ಸರ್ಕಾರದ ನಿರ್ಲಕ್ಷ ಧೋರಣೆ ಮತ್ತು ಹಾಸ್ಟೆಲ್‌ಗಳ ಸುಧಾರಣೆಗಳಿಗಾಗಿ ಸರ್ಕಾರ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಹಿಂದುಳಿದ ವರ್ಗಗಳ ಕಲ್ಯಾಣ ಮಂತ್ರಿಯವರ ಗಮನ ಸೆಳೆಯಲು ಬಯಸುತ್ತೇನೆ.

**ಹೇಳಿಕೆ:**

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ರಾಜ್ಯಾದ್ಯಂತ 1246 ಮೆಟ್ರಿಕ್ ಪೂರ್ವ ಮತ್ತು 1351 ಮೆಟ್ರಿಕ್ ನಂತರದ ಹೀಗೆ ಒಟ್ಟು 2597 ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿದ್ದು, ಸದರಿ ವಿದ್ಯಾರ್ಥಿನಿಲಯಗಳಲ್ಲಿ ಕ್ರಮವಾಗಿ 67358 ಮತ್ತು 177083 ಹೀಗೆಒಟ್ಟು 244441 ವಿದ್ಯಾರ್ಥಿಗಳಿಗೆ ಪ್ರವೇಶ ಅವಕಾಶವನ್ನು ಕಲ್ಪಿಸಲಾಗಿರುತ್ತದೆ.

ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ 2597 ವಿದ್ಯಾರ್ಥಿನಿಲಯಗಳ ಪೈಕಿ1634 ವಿದ್ಯಾರ್ಥಿನಿಲಯಗಳು ಸ್ವಂತ ಕಟ್ಟಡಗಳಲ್ಲಿ, 234 ವಿದ್ಯಾರ್ಥಿನಿಲಯಗಳು ಉಚಿತ ಕಟ್ಟಡಗಳಲ್ಲಿ ಹಾಗೂ 729 ವಿದ್ಯಾರ್ಥಿನಿಲಯಗಳು ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುತ್ತವೆ. ಸ್ವಂತ ಕಟ್ಟಡ ಲಭ್ಯವಿಲ್ಲದ ವಿದ್ಯಾರ್ಥಿನಿಲಯಗಳ ನಿರ್ವಹಣೆಗೆ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಹೊಂದಿರುವ ಬಾಡಿಗೆ ಕಟ್ಟಡಗಳನ್ನು ಬಾಡಿಗೆಗೆ ಪಡೆಯಲಾಗಿರುತ್ತದೆ. ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿನಿಲಯಗಳಿಗೆ ಅನುದಾನದ ಲಭ್ಯತೆಯನುಸಾರ ಸ್ವಂತ ಕಟ್ಟಡ ನಿರ್ಮಾಣ ಮಾಡಲು ಕ್ರಮವಹಿಸಲಾಗುತ್ತಿದೆ.

...2

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿನಿಲಯಗಳ ನಿರ್ವಹಣೆಗೆ 2597 ನಿಲಯ ಪಾಲಕರು/ ನಿಲಯ ಮೇಲ್ವಿಚಾರಕರ ಹುದ್ದೆಗಳು ಮಂಜೂರಾಗಿದ್ದು, ಈ ಪೈಕಿ 1330 ಹುದ್ದೆಗಳನ್ನು ಭರ್ತಿ ಮಾಡಲಾಗಿದ್ದು, 1267 ಹುದ್ದೆಗಳು ಖಾಲಿಯಿರುತ್ತದೆ. ಖಾಲಿಯಿರುವ ವಿದ್ಯಾರ್ಥಿನಿಯಗಳಿಗೆ ಆಯಾ ತಾಲ್ಲೂಕು/ಜಿಲ್ಲೆಗಳ ವಿದ್ಯಾರ್ಥಿನಿಲಯಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನಿಲಯಪಾಲಕರು/ ನಿಲಯ ಮೇಲ್ವಿಚಾರಕರುಗಳಿಗೆ ಹೆಚ್ಚುವರಿ ಪ್ರಭಾರ ನೀಡಿ ನಿಲಯಗಳನ್ನು ನಿರ್ವಹಣೆ ಮಾಡಲಾಗುತ್ತಿದೆ. ಇಲಾಖೆಯಡಿ ಒಟ್ಟು 11743 ಅಡುಗೆಯವರು, ಅಡುಗೆ ಸಹಾಯಕರು ಮತ್ತು ರಾತ್ರಿ ಕಾವಲುಗಾರರ ಹುದ್ದೆಗಳು ಮಂಜೂರಾಗಿದ್ದು, ಈ ಪೈಕಿ 4667 ಹುದ್ದೆಗಳು ಭರ್ತಿಯಾಗಿದ್ದು, ಬಾಕಿ 7076 ಹುದ್ದೆಗಳು ಖಾಲಿ ಉಳಿದಿದ್ದು, ಖಾಲಿಯಿರುವ ಅಡುಗೆಯವರು, ಅಡುಗೆ ಸಹಾಯಕರು ಮತ್ತು ರಾತ್ರಿಕಾವಲುಗಾರರ ಹುದ್ದೆಗಳಿಗೆ ಹೊರ ಸಂಪನ್ಮೂಲದ ಮೂಲಕ ನೇಮಿಸಿಕೊಂಡು ವಿದ್ಯಾರ್ಥಿನಿಲಯಗಳನ್ನು ನಿರ್ವಹಿಸಲಾಗುತ್ತಿದೆ.

ಇಲಾಖೆಯ ವಿದ್ಯಾರ್ಥಿನಿಲಯಗಳಲ್ಲಿನ ನಿಲಯಾರ್ಥಿಗಳಿಗೆ ಮೆನುಚಾರ್ಟ್ ಅನುಸಾರ ಪೌಷ್ಠಿಕ ಆಹಾರ ಮತ್ತು ಉಚಿತ ವಸತಿ ಸೌಲಭ್ಯವನ್ನು ಕಲ್ಪಿಸಲಾಗುತ್ತಿದೆ. ವಿದ್ಯಾರ್ಥಿನಿಲಯಗಳಲ್ಲಿ ಶುದ್ಧ ಕುಡಿಯುವ ನೀರು, ಸ್ನಾನಕ್ಕೆ ಬಿಸಿನೀರಿನ ವ್ಯವಸ್ಥೆ ಹಾಗೂ ಶೌಚಾಲಯಗಳ ವ್ಯವಸ್ಥೆಯನ್ನು ಕಲ್ಪಿಸಲಾಗುತ್ತಿದೆ. ಪ್ರತಿ ಆರ್ಥಿಕ ವರ್ಷದಲ್ಲಿ ಒದಗಿಸುವ ಅನುದಾನದ ಲಭ್ಯತೆಯ ಆಧಾರದಲ್ಲಿ ವಿದ್ಯಾರ್ಥಿಗಳಿಗೆ ಹಾಸಿಗೆ ಮತ್ತು ಮಂಚಗಳನ್ನು ಒದಗಿಸಲಾಗಿದೆ, ಬಾಕಿ ಇರುವ ನಿಲಯಗಳಿಗೆ ಅನುದಾನದ ಲಭ್ಯತೆ ಆಧರಿಸಿ ಹಂತ ಹಂತವಾಗಿ ಹಾಸಿಗೆ ಮತ್ತು ಮಂಚಗಳನ್ನು ಒದಗಿಸಲಾಗುವುದು. ಪ್ರತಿವರ್ಷ ಹೊಸದಾಗಿ ಪ್ರವೇಶ ಬಯಸುವ ಮತ್ತು ಮೂರು ವರ್ಷ ಪೂರ್ಣಗೊಳಿಸುವ ವಿದ್ಯಾರ್ಥಿಗಳಿಗೆ ಜಮಖಾನ-ಬೆಡ್‌ಶೀಟ್ ಗಳನ್ನು ಒದಗಿಸಲಾಗುತ್ತದೆ.

ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿನ ವಿದ್ಯಾರ್ಥಿಗಳಿಗೆ ಪ್ರತಿ ಮಾಹೆಯಾನ ಬಾಲಕರಿಗೆ ನಿರ್ಮಲ ಕಿಟ್ ಮತ್ತು ಬಾಲಕರಿಗೆ ಸಿರಿಗಂಧಕಿಟ್‌ಗಳನ್ನು ವಿತರಿಸಲಾಗುತ್ತಿದೆ. ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳಲ್ಲಿನ ವಿದ್ಯಾರ್ಥಿಗಳಿಗೆ ಪ್ರತಿ ವರ್ಷಕ್ಕೊಮ್ಮೆ ಪ್ರತಿ ವಿದ್ಯಾರ್ಥಿಗೆ ರೂ.400/- ಗಳ ವೆಚ್ಚದಲ್ಲಿ ಉತ್ತಮ ಗುಣಮಟ್ಟದ ಲೇಖನ ಸಾಮಗ್ರಿ ನೀಡಲಾಗುತ್ತಿದೆ, ಪ್ರತಿ ವಿದ್ಯಾರ್ಥಿಗೆ ಎರಡು ತಿಂಗಳಿಗೊಮ್ಮೆ ರೂ.60/-ರಂತೆ (ವಾರ್ಷಿಕವಾಗಿ 5 ಬಾರಿಮಾತ್ರ) ಕ್ಷೌರದ ವೆಚ್ಚಭರಿಸಲಾಗುತ್ತಿದೆ, ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳಲ್ಲಿನ ಪ್ರತಿ ವಿದ್ಯಾರ್ಥಿಗೆ ವಾರ್ಷಿಕವಾಗಿ ಒಂದು ಜೊತೆ ಉತ್ತಮ ಗುಣಮಟ್ಟದ ನೈಟ್‌ಡ್ರೆಸ್ ಮತ್ತು ಟ್ರಾಕ್‌ಸೂಟ್‌ಗಳನ್ನು ನೀಡಲಾಗುತ್ತಿದೆ.

ವಿದ್ಯಾರ್ಥಿಗಳ ಶೈಕ್ಷಣಿಕ ಅನುಕೂಲಕ್ಕಾಗಿ ವಿದ್ಯಾರ್ಥಿನಿಲಯಗಳಲ್ಲಿ ಗ್ರಂಥಾಲಯ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ. ಮೆಟ್ರಿಕ್-ಪೂರ್ವ ವಿದ್ಯಾರ್ಥಿನಿಲಯಗಳಲ್ಲಿನ ವಿದ್ಯಾರ್ಥಿಗಳಿಗೆ ಕಠಿಣ ವಿಷಯಗಳಾದ ಗಣಿತ, ವಿಜ್ಞಾನ ಮತ್ತು ಇಂಗ್ಲಿಷ್ ವಿಷಯಗಳನ್ನು ಬೋಧನೆ ಮಾಡಲು ನುರಿತ ಅರೆಕಾಲಿಕ ಬೋಧಕರನ್ನು ನೇಮಕ ಮಾಡಿಕೊಳ್ಳಲಾಗುತ್ತಿದೆ ಹಾಗೂ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಬಿ.ಇಡಿ ಪೂರ್ಣಗೊಳಿಸಿರುವ ನಿಲಯ ಮೇಲ್ವಿಚಾರಕರಿಂದ ವಿಶೇಷ ಬೋಧನೆ ಮಾಡಿಸಲಾಗುತ್ತಿದೆ. ವಿದ್ಯಾರ್ಥಿನಿಲಯಗಳಲ್ಲಿ ನಿಯಮಿತವಾಗಿ ಆರೋಗ್ಯ ಇಲಾಖೆಯ ಸಹ ಯೋಗದೊಂದಿಗೆ ವಿದ್ಯಾರ್ಥಿಗಳ ಆರೋಗ್ಯ ತಪಾಸಣೆ ಕೈಗೊಳ್ಳಲಾಗುತ್ತದೆ. ವಿದ್ಯಾರ್ಥಿನಿಲಯಗಳಲ್ಲಿ ನಿಯಮಿತವಾಗಿ ಪೋಷಕರ ಸಭೆಗಳನ್ನು ನಡೆಸಲಾಗುತ್ತಿದೆ.

**ಸಂಖ್ಯೆ: ಹಿಂವಕ 837 ಬಿಎಂಎಸ್ 2025**

**(ಶಿವರಾಜ. ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು.